<u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2241

ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 26.03.2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಚಾಮರಾಜನಗರವು ಅಭಿವೃದ್ಧಿ ಹೊಂದುತ್ತಿರುವ ಜಿಲ್ಲಾ ಕೇಂದ್ರವಾಗಿದ್ದು, ಕರ್ನಾಟಕ ಹಾಗೂ ತಮಿಳುನಾಡು ಸಾರಿಗೆ ಸಂಸ್ಥೆಗಳ ಹೆಚ್ಚಿನ ಬಸ್ ಸಂಚಾರ ಇರುವುದರಿಂದ, ಮುಂದಿನ ಬೆಳವಣಿಗೆಯನ್ನು ದೃಷ್ಟಿಯಲ್ಲಿಟ್ಟುಕೊಂಡು, ಒಂದು ಹೈಟೆಕ್ ಬಸ್ ನಿಲ್ದಾಣ ಸ್ಥಾಪಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆಯೇ; ಈ ಬಗ್ಗೆ ಸರ್ಕಾರ ಗಮನಹರಿಸುವುದೇ;	ಚಾಮರಾಜನಗರದಲ್ಲಿ ಹೈಟೆಕ್ ಬಸ್ ನಿಲ್ದಾಣ ಸ್ಥಾಪಿಸುವ ವಿಷಯವು ಪರಿಶೀಲನೆಯಲ್ಲಿದ್ದು, ಈ ಬಗ್ಗೆ ಗಮನಹರಿಸಲಾಗುವುದು.
ಆ)	ಹಾಲಿ ಇರತಕ್ಕ ಬಸ್ ನಿಲ್ದಾಣ ಬಹಳ ಕಿರಿದಾಗಿದ್ದು, ಸಂತೇಮರಹಳ್ಳಿ ರಸ್ತೆಯಲ್ಲಿರುವ ರೇಷ್ಮೆ ಇಲಾಖೆಯ ಕಟ್ಟಡ ಮತ್ತು ಜಾಗವನ್ನು ವಶಕ್ಕೆ ತೆಗೆದುಕೊಂಡು ಈ ಸ್ಥಳದಲ್ಲಿ ಒಂದು ಹೈಟೆಕ್ ಬಸ್ ನಿರ್ಮಾಣ ಸ್ಥಾಪಿಸಲು ಕ್ರಮ ವಹಿಸಲಾಗುವುದೇ?	ಚಾಮರಾಜನಗರ ಪಟ್ಟಣದ ಸಂತೇಮರಳ್ಳಿ ವೃತ್ತದ ಬಳಿಯಿರುವ ರೇಷ್ಮೆ ಇಲಾಖೆಗೆ ಸೇರಿದ ರೇಷ್ಮೆ ಕಾರ್ಖಾನೆಯ ಜಾಗದಲ್ಲಿ ಮುಖ್ಯರಸ್ತೆಗೆ ಹೊಂದಿಕೊಂಡಂತೆ ಇರುವ 3 ಎಕರೆ 20 ಗುಂಟೆ ಜಮೀನನ್ನು ಕ.ರಾ.ರ.ಸಾ.ನಿಗಮದ ಬಸ್ ನಿಲ್ದಾಣ ನಿರ್ಮಿಸಲು ಉಚಿತವಾಗಿ ಮಂಜೂರು ಮಾಡಿಸಿಕೊಡುವಂತೆ ಕೃಷಿ ಮತ್ತು ರೇಷ್ಮೆ ಇಲಾಖೆ ಹಾಗೂ ಜಿಲ್ಲಾಡಳಿತವನ್ನು ಕೋರಲಾಗಿರುತ್ತದೆ. ಸದರಿ ನಿವೇಶನವು ನಿಗಮದ ಸ್ವಾಧೀನಕ್ಕೆ ಬಂದ ನಂತರ ಸಂಸ್ಥೆಯು ಬಸ್ ನಿಲ್ದಾಣ ನಿರ್ಮಾಣ ಮಾಡಲು ಹೊರಡಿಸಿರುವ ಸುತ್ತೋಲೆ ಸಂಖ್ಯೆ: 01/2015-16, ದಿ:06.06.2015ರ ಪ್ರಕಾರ ಸಾರಿಗೆ ಅವಶ್ಯಕತೆ ಹಾಗೂ ಆರ್ಥಿಕ ಲಭ್ಯತೆಯನ್ನು ಆಧರಿಸಿ ಈ ಬಗ್ಗೆ ಕ್ರಮ ಜರುಗಿಸಲಾಗುವುದು.

ಸಂಖ್ಯೆ: ಟಿಡಿ 162 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು